Akashvani : Bangalore
Regional Bulletin In Kannada
03.03.2025 / 14.30 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಆಯವ್ಯಯದಲ್ಲಿ ವೃದ್ಧಿ, ಹಣಕಾಸು ಸಂಸ್ಥೆಗಳ ಕಡಿವಾಣ; ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭಾಷಣದಲ್ಲಿ ಪ್ರಸ್ತಾಪ
- ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತಿಗೆ ಬದ್ಧ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ರಾಜ್ಯಪಾಲರಿಗೆ ಸರ್ಕಾರದ ಅವಹೇಳನ ಆರೋಪ; ಶಾಸಕರ ಭವನದಿಂದ ವಿಧಾನಸೌಧಕ್ಕೆ ಬಿಜೆಪಿ ಪ್ರತಿಭಟನಾ ಮೆರವಣಿಗೆ
- ವೇವ್ಸ್ ಶೃಂಗಸಭೆ ಹಿನ್ನೆಲೆ; ಬೆಂಗಳೂರಿನ ಖಾಸಗಿ ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರ

<><*<><>*><>

ರಾಜ್ಯ ವಿಧಾನಮಂಡಲ ಅಧಿವೇಶನ ಇಂದು ಆರಂಭವಾಗಿದ್ದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಿಧಾನಮಂಡಲದ ಉಭಯ ಸದನ ಉದ್ದೇಶಿಸಿ ಮಾತನಾಡಿ ಸರ್ಕಾರದ ಹಲವು ಕಾರ್ಯಕ್ರಮಗಳನ್ನು ಪ್ರಸ್ತಾಪಿಸಿದ ಅವರು, ಪ್ರಮುಖವಾಗಿ ಸಾಲ ವಸೂಲಾತಿಯಲ್ಲಿನ ಕಿರುಕುಳವನ್ನು ತಡೆಯಲು ಹೊಸ ಸುಗ್ರೀವಾಜ್ಞೆಯನ್ನು ಜಾರಿಗೆ ತಂದಿರುವ ವಿಚಾರವನ್ನು ಉಲ್ಲೇಖಿಸಿದ್ದಾರೆ.

ಸರ್ಕಾರ ವೇಗ ಗತಿಯಲ್ಲಿ ಅಭಿವೃದ್ಧಿ ಕೆಲಸ ಮಾಡುತ್ತಿದ್ದು ರಾಜ್ಯದ ಆಯವ್ಯಯ ವೃದ್ಧಿಯಾಗುತ್ತಿದೆ. ರಾಜ್ಯದಲ್ಲಿ ಉತ್ತಮ ಮಳೆ ಆಗಿದ್ದರಿಂದ ಉತ್ತಮ ಫಸಲು ಬಂದಿದೆ. ರಾಜ್ಯ ಸರ್ಕಾರ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಗ್ಯಾರಂಟಿ ಯೋಜನೆಯಿಂದ ರಾಜ್ಯ ದಿವಾಳಿ ಆಗಲಿದೆ ಎಂಬ ಆರೋಪಗಳು ಸುಳ್ಳು ಎಂದು ಸರ್ಕಾರ ಸಾಬೀತು ಮಾಡಿದೆ. ಸರ್ಕಾರ ಕಟ್ಟಕಡೆಯ ವ್ಯಕ್ತಿಗೂ ಗ್ಯಾರಂಟಿ ಯೋಜನೆಯನ್ನು ಸರ್ಕಾರ ತಲುಪಿಸಿದೆ. ಜಿಎಸ್‌ಟಿ ಸಂಗ್ರಹದಲ್ಲೂ ರಾಜ್ಯ ಸರ್ಕಾರ ಮುಂಚೂಣಿಯಲ್ಲಿದೆ. ಕೆಎಂಎಫ್‌ನಿಂದ ಅತಿ ಹೆಚ್ಚು ಹಾಲು ಸಂಗ್ರಹವಾಗುತ್ತಿದೆ ಎಂದು ರಾಜ್ಯಪಾಲರು ತಿಳಿಸಿದರು. ಕಲ್ಯಾಣ ಕಾರ್ಯಕ್ರಮಗಳಿಗಾಗಿ ವರ್ಷಕ್ಕೆ ಒಟ್ಟಾರೆ ೯೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ಖರ್ಚು ಮಾಡಲಾಗುತ್ತಿದೆ. ರಾಜ್ಯದ ೧ ಸಾವಿರದ ೯೫೩ ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಿ ನರ್ಸರಿ ಶಾಲೆಗಳನ್ನು ತೆರೆಯಲಾಗಿದೆ.

ಜಾಗತಿಕ ಹೂಡಿಕೆದಾರರ ಸಮ್ಮೇಳನವನ್ನು ಯಶಸ್ವಿಯಾಗಿ ನಿಭಾಯಿಸಲಾಗಿದ್ದು, ವಿಶ್ವದ ೧೯ ಪ್ರಮುಖ ದೇಶಗಳು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದವು. ಮೂಲಭೂತ ಸೌಕರ್ಯಗಳನ್ನು ಒದಗಿಸುವುದರಲ್ಲಿ ಕರ್ನಾಟಕ ಇಡೀ ದೇಶದಲ್ಲಿ ಮುಂಚೂಣಿಯ ರಾಜ್ಯವಾಗಿದೆ ಎಂದು ರಾಜ್ಯಪಾಲರು ಭಾಷಣದಲ್ಲಿ ತಿಳಿಸಿದರು. ದೇಶದಲ್ಲಿಯೇ ಮೊದಲ ಸ್ಥಾನದಲ್ಲಿರುವ ಕರ್ನಾಟಕ ೨೨.೪೧ ಲಕ್ಷ ಹೆಕ್ಟೆರ್ ತೋಟಗಾರಿಕಾ ಪ್ರದೇಶವನ್ನು ಹೊಂದಿದೆ. ಆರ್ಥಿಕ ಬಿಕ್ಕಟ್ಟಿನಲ್ಲಿದ್ದ ಮೈಸೂರು ಸಕ್ಕರೆ ಕಂಪನಿಗೆ ಮರುಜೀವ ನೀಡಿ ೨೦೨೪-೨೫ನೇ ಸಾಲಿನ ಕಬ್ಬು ಅರೆಯುವ ಹಂಗಾಮಿನಲ್ಲಿ ೧ ಲಕ್ಷ ೯೯ ಸಾವಿರದ ೮೮೮ ಮೆಟ್ರಿಕ್‌ಟನ್‌ಗಳಷ್ಟು ಕಬ್ಬನ್ನು ನುರಿಸಿ ರೈತರಿಗೆ ೭೦ ಕೋಟಿ ೪೮ ಲಕ್ಷ ರೂಪಾಯಿ ಕಬ್ಬು ಬಿಲ್ಲನ್ನು ಪಾವತಿಸಲಾಗಿದೆ. ರಾಜ್ಯದಲ್ಲಿ ಕೈಗಾರಿಕಾ ಕ್ಷೇತ್ರವನ್ನು ದೇಶದಲ್ಲಿಯೇ ಅಭೂತಪೂರ್ವ ಮಾದರಿಯಲ್ಲಿ ಮುನ್ನಡೆಸುವ ಉದ್ದೇಶದಿಂದ ಹೊಸ

ಕರ್ನಾಟಕ ಕೈಗಾರಿಕಾ ನೀತಿ, ೨೦೨೫-೩೦ ಅನ್ನು ಜಾರಿಗೆ ತರಲಾಗಿದೆ. ಬಂಡವಾಳ ಹೂಡಿಕೆಯಲ್ಲಿ ರಾಜ್ಯವು ೨ನೇ ಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ. ಬೆಂಗಳೂರು ನಗರದಲ್ಲಿ ಹಸಿರು ವಲಯ ಸಂರಕ್ಷಿಸಲು ಮತ್ತು ಅಪರೂಪದ ಪಕ್ಷಿಗಳ ನೆಲೆಯನ್ನು ಕಾಪಾಡಲು ಹೆಸರಘಟ್ಟ ಕೆರೆ ಪ್ರದೇಶದ ೫ ಸಾವಿರದ ೬೭೮ ಎಕರೆ ಪ್ರದೇಶವನ್ನು ಗ್ರೇಟರ್ ಹೆಸರಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿ, ಭೂಕಬಳಿಕೆಗೆ ಕಡಿವಾಣ ಹಾಕಲಾಗಿದೆ. ರಾಜ್ಯದಲ್ಲಿ ಕಿಡ್ನಿ ರೋಗಿಗಳಿಗೆ ಉಚಿತವಾಗಿ ನೀಡುವ ಡಯಾಲಿಸಿಸ್ ಕೇಂದ್ರಗಳನ್ನು ೧೯೨ ರಿಂದ ೨೨೦ ಕ್ಕೆ ವಿಸ್ತರಿಸಿ ೩ ಕೋಟಿ ೬೭ ಲಕ್ಷ ಡಯಾಲಿಸಿಸ್ ಸೈಕಲ್ ಸೇವೆಗಳನ್ನು ಒದಗಿಸಲಾಗಿದೆ. ಯುವನಿಧಿ ಯೋಜನೆ" ಅಡಿಯಲ್ಲಿ ೨ ಲಕ್ಷ ೨೩ ಸಾವಿರದ ೮೮೩ ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದು, ೧ ಲಕ್ಷ ೬೫ ಸಾವಿರದ ೧೪ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿದ್ದಾರೆ.

ಧ್ವನಿ: ಥಾವರ್‌ಚಂದ್ ಗೆಹ್ಲೋಟ್, ರಾಜ್ಯಪಾಲ ( ೩೮ ಸೆಕೆಂಡ್‌ಗಳು)

<><*<><>*><>

ರಾಜ್ಯಪಾಲರ ಭಾಷಣಕ್ಕೂ ಮೊದಲು ಸಭಾಧ್ಯಕ್ಷ ಯು.ಟಿ.ಖಾದರ್, ಸಭಾಪತಿ ಬಸವರಾಜ್ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ್ ಸೇರಿದಂತೆ ಹಲವು ಗಣ್ಯರು ವಿಧಾನಸೌಧ ಮುಂಭಾಗದಲ್ಲಿ ರಾಜ್ಯಪಾಲರನ್ನು ಸ್ವಾಗತಿಸಿದರು. ಪೊಲೀಸ್ ಅಶ್ವದಳ ಹಾಗೂ ಪೊಲೀಸ್ ಬ್ಯಾಂಡ್ ವಾದನದ ಮೂಲಕ ರಾಜ್ಯಪಾಲರನ್ನು ಸದನಕ್ಕೆ ಸ್ವಾಗತಿಸಲಾಯಿತು.

<><*<><>*><>

ಅಧಿಕಾರ ಹಂಚಿಕೆ ವಿಚಾರವಾಗಿ ಚರ್ಚೆ ಮಾಡದಂತೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಸೂಚನೆ ನೀಡಿದ್ದು ಅವರ ಮಾತಿಗೆ ಬದ್ಧ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸೌಧದ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ "ವೀರಪ್ಪ ಮೊಯ್ಲಿ ಅವರು ತಮ್ಮ ಅಭಿಪ್ರಾಯ ಹೇಳಿದ್ದಾರೆ. ಅದರ ಬಗ್ಗೆ ಚರ್ಚೆ ಮಾಡುವುದಿಲ್ಲ. ಅದರ ಅಗತ್ಯವೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಜ್ಯಪಾಲರ ಹಕ್ಕುಗಳನ್ನು ಮೊಟಕುಗೊಳಿಸಿ ಅವರಿಂದಲೇ ಸರ್ಕಾರದ ಸಾಧನೆಗಳ ಬಗ್ಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಸುಳ್ಳು ಹೇಳಿಸುತ್ತಿದೆ ಎಂದು ಆರೋಪಿಸಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಪ್ರತಿಭಟನೆ ನಡೆಸಿದರು. ಶಾಸಕರ ಭವನದಿಂದ ವಿಧಾನಸೌಧಕ್ಕೆ ಕಾಲ್ನಡಿಗೆ ಮೂಲಕ ತೆರಳಿ ಉಭಯ ಪಕ್ಷಗಳ ಸದಸ್ಯರು ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್.ಅಶೋಕ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಹಾಗೂ ಬಿಜೆಪಿ ಶಾಸಕರು ಮತ್ತು ಪರಿಷತ್ ಸದಸ್ಯರು ಶಾಸಕರ ಭವನದಿಂದ ವಿಧಾನಸೌಧಕ್ಕೆ ಮೆರವಣಿಗೆ ಮೂಲಕ ತೆರಳಿದರು. ಈ ವೇಳೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಕಾಂಗ್ರೆಸ್ ನೇತೃತ್ವದ ಸರ್ಕಾರ ರಾಜ್ಯಪಾಲರನ್ನು ಅವಮಾನಿಸುತ್ತಿದೆ ಎಂದು ದೂರಿದರು. ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರ ಭಿಕ್ಷೆ ಬೇಡುವ ಪರಿಸ್ಥಿತಿ ಬಂದೊದಗಿದೆ ಎಂದು ಆರೋಪಿಸಿದರು.

<><*<><>*><>

ಮೇ ೧ರಿಂದ ನಾಲ್ಕರವರೆಗೆ ಮುಂಬೈನಲ್ಲಿ ಮೊದಲ ವಿಶ್ವ ಶ್ರವಣ ದೃಶ್ಯ ಮನೋರಂಜನಾ ಶೃಂಗಸಭೆ- ವೇವ್ಸ್ ಆಯೋಜಿಸಲಾಗಿದೆ. ಇದರ ಪೂರ್ವಭಾವಿಯಾಗಿ ಇಂದು  ಬೆಂUಳೂರಿನ  ಜಯನಗರದಲ್ಲಿರುವ ಜೈನ್ ಡೀಮ್ಡ್ ವಿಶ್ವವಿದ್ಯಾಲಯದದಲ್ಲಿ ಟ್ರೈಲರ್ ತಯಾರಿಕೆಯಲ್ಲಿ 'ಹ್ಯಾಂಡ್ಸ್ ಆನ್ ಎಕ್ಸ್‌ಪೀರಿಯೆನ್ಸ್' ಕಾರ್ಯಗಾರವನ್ನು ಆಯೋಜಿಸಲಾಗಿತ್ತು. ಇದರಲ್ಲಿ ಸುಮಾರು ೬೨ ವಿದ್ಯಾರ್ಥಿಗಳು ಇಂದು ಭಾಗವಹಿಸಿದ್ದಾರೆ. ಕೇಂದ್ರ ಚಲನಚಿತ್ರ ಪ್ರಾಮಾಣೀಕರಣ ಮಂಡಳಿಯ ಪ್ರಾದೇಶಿಕ ಅಧಿಕಾರಿ  ಯಶ್ವಂತ್ ಶೆಹನಾಯ್ ಮಾತನಾಡಿ, ಗೇಮಿಂಗ್, ಚಲನಚಿತ್ರ, ಸಾಫ್ಟ್ ವೇರ್, ಆನಿಮೇಷನ್ ಸೇರಿದಂತೆ ೩೩ ವೇವ್ಸ್ ಇಂಡಿಯಾ ಸವಾಲುಗಳ ಬಗ್ಗೆ ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ ಪ್ರದರ್ಶಿಸಲು ಅವಕಾಶವಿದೆ ಎಂದು ತಿಳಿಸಿದ್ದಾರೆ.

ಯಶ್ವಂತ್ ಶೆಹನಾಯ್- ಕೇಂದ್ರ ಚಲನಚಿತ್ರ ಮಂಡಳಿಯ ಪ್ರಾದೇಶಿಕ ಅಧಿಕಾರಿ ( ೩೩ ಸೆಕೆಂಡ್ )

ಇಂದು ಏರ್ಪಡಿಸಿದ್ದ ಕಾರ್ಯಗಾರದಲ್ಲಿ ಚಲನಚಿತ್ರೋದ್ಯಮದ ಭಾಗವಾಗಿ ಭಾಗವಹಿಸಿದ್ದ ಫಿಕ್ಕಿ ಉಪಾಧ್ಯಕ್ಷ ಸುನೀಲ್ ಕುಮಾರ್ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ  ಸುನೀಲ್ ಕುಮಾರ್, ಎಫ್ ಕೆ ಸಿಸಿಐ ಉಫಾಧ್ಯಕ್ಷ ( ೩೦ ಸೆಕೆಂಡ್)

ಸಮಗ್ರ ಶಿಕ್ಷಣ ಕರ್ನಾಟಕದಲ್ಲಿ ವೇವ್ಸ್ ನೋಡಲ್ ಅಧಿಕಾರಿ ಹೇಮಾವತಿ, ಮಾತನಾಡಿ ತಂತ್ರಜ್ಞಾನ ವಿಭಾಗದಲ್ಲಿ ಪ್ರೌಢಿಮೆ ತೋರಿಸಲು ವಿದ್ಯಾರ್ಥಿಗಳಿಗೆ ವೇವ್ಸ್  ಶೃಂಗಸಭೆ ಸಹಾಯಕವಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ - ಹೇಮಾವತಿ, ಸಮಗ್ರ ಶಿಕ್ಷಣ  ಕರ್ನಾಟಕದಲ್ಲಿ ವೇವ್ಸ್ ನೋಡಲ್ ಅಧಿಕಾರಿ ( ೨೮ ಸೆಕೆಂಡ್)

<><*<><>*><>

S೩P, ಖಿSP ಯೋಜನೆ ಅಡಿಯಲ್ಲಿ ಮೀಸಲಾಗಿರುವ ಹಣದ ಪೈಕಿ ಸುಮಾರು ೨೫ ಸಾವಿರ ಕೋಟಿ ಹಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ದುರ್ಬಳಕೆ ಮಾಡಿಕೊಂಡಿದ್ದು ಇದರ ವಿರುದ್ಧ ಬಿಜೆಪಿ ಹೋರಾಟ ಹಮ್ಮಿಕೊಳ್ಳಲಿದೆ ಎಂದು ಸಂಸದ ಯದುವೀರ್ ಒಡೆಯರ್ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಪರಿಶಿಷ್ಟ ಸಮುದಾಯದ ಜನರ ಅಭಿವೃದ್ಧಿಗೆ ಮೀಸಲಿಟ್ಟಿರುವ ಹಣವನ್ನು ರಾಜ್ಯ ಸರ್ಕಾರ ತಮ್ಮ ಗ್ಯಾರಂಟಿ ಯೋಜನೆಗಳಿಗಾಗಿ ಬಳಸಿಕೊಳ್ಳುತ್ತಿರುವುದು ಸರಿಯಲ್ಲ, ಇದರಿಂದ ಸಾಮಾಜಿಕ ನ್ಯಾಯ ಕಾಪಾಡುವುದು ಅಸಾಧ್ಯ ಎಂದು ಅಭಿಪ್ರಾಯಪಟಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮತ್ತು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ ಸುರೇಶ್ ಬಾಬು ನೇತೃತ್ವದಲ್ಲಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಗೃಹಲಕ್ಷ್ಮಿ ಹಣ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ ನಡೆಯಿತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>